# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 506 (683) |
| ಮಾನ್ಯ ಸದಸ್ಯರ ಹೆಸರು | ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 22.07.2024 |

| ಪ್ರಶ್ನೆ | | ಉತ್ತರ |
|---|---|---|
| (ಅ) | ಕೇಂದ್ರ ಸರ್ಕಾರವು ಘೋಷಿಸಿರುವ ನೂತನ ಶಿಕ್ಷಣ ಪದ್ಧತಿಯಲ್ಲಿ ರಾಜ್ಯ ಸರ್ಕಾರ ಯಾವ ಕೊರತೆಗಳನ್ನು ಕಂಡಿದೆ; | ಭಾರತ ಸರ್ಕಾರವು ಪ್ರಕಟಿಸಿರುವ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯದ ಉನ್ನತ ಶಿಕ್ಷಣ ಇಲಾಖೆಯಡಿ ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳಲ್ಲಿ 2021-22ನೇ ಶೈಕ್ಷಣಿಕ ವರ್ಷದಿಂದ ಅಗತ್ಯ ಮಾರ್ಗಸೂಚಿಗಳನುಸಾರ ಅನುಷ್ಠಾನಗೊಳಿಸಿ ಸರ್ಕಾರದ ಆದೇಶ ಸಂಖ್ಯೆ: ಇಡಿ 260 ಯುಎನ್‌ಇ 2019 (ಭಾಗ-1), ದಿನಾಂಕ: 07.08.2021ರಲ್ಲಿ ಆದೇಶ ಹೊರಡಿಸಲಾಗಿದೆ.<br><br>ರಾಷ್ಟ್ರೀಯ ಶಿಕ್ಷಣ ನೀತಿಯ ಆಶಯಗಳಿಗೆ ವಿರೋಧ ಇಲ್ಲದಂತೆ ರಾಜ್ಯದಲ್ಲಿ ಪ್ರಾದೇಶಿಕ ಸಮತೋಲ ಕಾಪಾಡುವ ದೃಷ್ಟಿಯಿಂದ ರಾಜ್ಯ ಹಾಗೂ ವಿದ್ಯಾರ್ಥಿಗಳ ಹಿತಾಸಕ್ತಿಗೆ ಅನುಗಣವಾಗಿ ರಾಜ್ಯದಲ್ಲಿ ಶಿಕ್ಷಣ ನೀತಿಯನ್ನು ರೂಪಿಸಬೇಕಾಗಿರುತ್ತದೆ.<br><br>ಅದರನ್ವಯ, ಸರ್ಕಾರವು 2023-24ನೇ ಆಯವ್ಯಯದಲ್ಲಿನ ಘೋಷಣೆಯಂತೆ ಸ್ಥಳೀಯವಾದ ಸಾಮಾಜಿಕ, ಸಾಂಸ್ಕೃತಿಕ ಮತ್ತು ಆರ್ಥಿಕ ವಾಸ್ತವಿಕತೆಯನ್ನು ಆಧರಿಸಿ ವೈಜ್ಞಾನಿಕವಾಗಿ ಹೊಸ ಶಿಕ್ಷಣ ನೀತಿಯನ್ನು ರೂಪಿಸಲಾಗುವುದೆಂದು ಘೋಷಿಸಲಾಗಿದೆ.<br><br>ಪ್ರಸ್ತುತ ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ-2020 ನ್ನು ರದ್ದುಗೊಳಿಸಿರುವುದಿಲ್ಲ. ಬದಲಿಗೆ ದೇಶದಲ್ಲಿನ ನೂತನ ರಾಷ್ಟ್ರೀಯ ಶಿಕ್ಷಣ ನೀತಿ-2020 ಸೇರಿದಂತೆ ಇಲ್ಲಿಯವರೆಗೂ ರಚನೆಗೊಂಡು ಅನುಷ್ಠಾನಗೊಂಡಿರುವ ಎಲ್ಲಾ ಶಿಕ್ಷಣ ನೀತಿ ಆಯೋಗಗಳ ವರದಿಗಳನ್ನು ಪರಿಗಣಿಸಿ ಗುಣಾತ್ಮಕ ಶಿಕ್ಷಣ ನೀತಿಯನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರಾಜ್ಯದಲ್ಲಿ ಶಾಲಾ ಮತ್ತು ಉನ್ನತ ಶಿಕ್ಷಣವನ್ನು ಜಾಗರೂಕತೆಯಿಂದ ಪರಿಶೀಲಿಸಿ ಸೂಕ್ತ ಯೋಜನೆಗಳನ್ನು ಶಿಫಾರಸ್ಸು ಮಾಡಲು ಶ್ರೇಷ್ಠ ಶಿಕ್ಷಣ ತಜ್ಞರಾದ Prof. Sukhdev Thorat, an eminent educationist, Indian Economist, Professor, Writer and Former, Chairman of UGC, New-Delhi, ಇವರ ಅಧ್ಯಕ್ಷತೆಯಲ್ಲಿ 15 ಸದಸ್ಯರ ಹಾಗೂ 8 ಸಲಹೆಗಾರರನ್ನೊಳಗೊಂಡ ರಾಜ್ಯ ಶಿಕ್ಷಣ ನೀತಿ ಆಯೋಗವನ್ನು ಸರ್ಕಾರದ ಆದೇಶ ಸಂಖ್ಯೆ: ED 166 UNE 2023, ದಿನಾಂಕ: 11.10.2023ರನ್ವಯ ರಚಿಸಲಾಗಿದೆ. |
| (ಆ) | ಇದಕ್ಕೆ ಕೇಂದ್ರ ಸರ್ಕಾರದ ನೀತಿಯನ್ನು ಅಳವಡಿಸದಿರಲು ಕಾರಣಗಳೇನು ; (ವಿವರ ಒದಗಿಸುವುದು) | |

| | | |
|---|---|---|
| | | ರಾಜ್ಯ ಶಿಕ್ಷಣ ನೀತಿ ಆಯೋಗವು ಈಗಾಗಲೇ ಹಲವಾರು ಸಭೆಗಳನ್ನು ನಡೆಸಿ, ಉನ್ನತ ಶಿಕ್ಷಣಕ್ಕೆ ಸಂಬಂಧಿಸಿದಂತೆ ಸರ್ಕಾರಕ್ಕೆ ಸಲ್ಲಿಸಿರುವ ಮಧ್ಯಂತರ ವರದಿಗಳಲ್ಲಿನ ಶಿಫಾರಸ್ಸುಗಳನ್ವಯ ಸರ್ಕಾರದ ಆದೇಶ ಸಂಖ್ಯೆ: ಇಡಿ 166 ಯುಎನ್ಇ 2023, ದಿನಾಂಕ: 08.05.2024ರಲ್ಲಿ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳಲ್ಲಿ ಪದವಿ ಕಾರ್ಯಕ್ರಮಗಳಿಗೆ 2024-25ನೇ ಶೈಕ್ಷಣಿಕ ಸಾಲಿನಿಂದ ಅಗತ್ಯ ಅನುಬಂಧ ಹಾಗೂ ಮಾರ್ಗಸೂಚಿಗಳನುಸಾರವಾಗಿ ಪದವಿ ಕಾರ್ಯಕ್ರಮಗಳ ಅವಧಿ ಮತ್ತು ಪಠ್ಯಕ್ರಮವನ್ನು ಪರಿಷ್ಕರಿಸಿ ಅನುಷ್ಠಾನಗೊಳಿಸಿ ಆದೇಶಿಸಲಾಗಿದೆ. |
| (ಇ) | ಕೇಂದ್ರ ರಾಜ್ಯದ ನಡುವೆ ಸೌಹಾರ್ದ ಸಂಬಂಧಗಳು ಹೇಗೆ ಸೃಜಿಸುತ್ತದೆ? (ಸಂಪೂರ್ಣ ವಿವರ ಒದಗಿಸುವುದು) | ಅನ್ವಯಿಸುವುದಿಲ್ಲ |

ಸಂಖ್ಯೆ: ಇಡಿ 155 ಯುಎನ್ಇ 2024

**(ಡಾ: ಎಂ. ಸಿ ಸುಧಾಕರ್)**
ಉನ್ನತ ಶಿಕ್ಷಣ ಸಚಿವರು